೧೮೭

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1603

ಉತ್ತರಿಸಬೇಕಾದ ದಿನಾಂಕ: 18.03.2026

ಸದಸ್ಯರ ಹೆಸರು: ಶ್ರೀ ವೈ. ಎಂ. ಸತೀಶ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ಸಚಿವರು: ಕಂದಾಯ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಭೂ ಸುರಕ್ಷಾ ಯೋಜನೆ ಉದ್ದೇಶ ಏನು: | ಭೂ ಸುರಕ್ಷಾ ಯೋಜನೆಯ ಉದ್ದೇಶ:<br>ಭೂಸುರಕ್ಷಾ ಯೋಜನೆಯು ರಾಜ್ಯದ ಕಂದಾಯ ಇಲಾಖೆಯು ಕೈಗೊಂಡಿರುವ ಒಂದು ಮಹತ್ವಾಕಾಂಕ್ಷಿಯ ಯೋಜನೆಯಾಗಿದ್ದು, ಸದರಿ ಯೋಜನೆಯಡಿ ಕಂದಾಯ ಕಛೇರಿಯ ಅಭಿಲೇಖಾಲಯಗಳಲ್ಲಿರುವ ಅತ್ಯಂತ ಪ್ರಮುಖವಾದ, ಹಳೆಯ ಮತ್ತು ಸ್ವಾತಂತ್ರ್ಯ ಪೂರ್ವದ ಅವಧಿಯ ಭೂದಾಖಲೆಗಳನ್ನು ಗಣಕೀಕರಣಗೊಳಿಸುವ ಮತ್ತು ಹಳೆಯ ಶಿಥಿಲಗೊಂಡ ದಾಖಲೆಗಳನ್ನು ಶಾಶ್ವತವಾಗಿ ಡಿಜಿಟಲ್ ರೂಪದಲ್ಲಿ ಉಳಿಸಿಕೊಳ್ಳಲು, ನಕಲಿ ದಾಖಲೆಗಳ ಸೃಷ್ಟಿಯನ್ನು ತಡೆಗಟ್ಟಲು ಮತ್ತು ಅವುಗಳನ್ನು ಆನ್‌ಲೈನ್‌ನಲ್ಲಿ ನಾಗರಿಕರಿಗೆ ಲಭ್ಯವಾಗುವಂತೆ ಮಾಡುವ ಉದ್ದೇಶವಿರುತ್ತದೆ. |
| ಆ | ಸದರಿ ಯೋಜನೆ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಯೋ ಅಥವಾ ರಾಜ್ಯ ಸರ್ಕಾರದ ಪುರಸ್ಕೃತ ಯೋಜನೆಯೋ: ಮಾಹಿತಿ ನೀಡುವುದು | ಭೂಸುರಕ್ಷಾ ಯೋಜನೆಯು ಪ್ರಾಥಮಿಕವಾಗಿ ಕೇಂದ್ರ ಸರ್ಕಾರದಿಂದ ಪ್ರಾರಂಭವಾಗಿದ್ದು, ಪ್ರಸ್ತುತದಲ್ಲಿ ರಾಜ್ಯ ಸರ್ಕಾರವು ಸದರಿ ಯೋಜನೆಯನ್ನು ಪುರಸ್ಕರಿಸಿ ಅನುದಾನಗಳನ್ನು ಒದಗಿಸಿ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. |
| ಇ | ಭೂಸುರಕ್ಷಾ ಯೋಜನೆಗೆ ಅಂದಾಜಿಸಲಾದ ಮೊತ್ತ ಎಷ್ಟು ಭೂಸುರಕ್ಷಾ ಯೋಜನೆಗೆ ಕೇಂದ್ರ ಸರ್ಕಾರದ ಅನುದಾನ ಎಷ್ಟು: | ಭೂಸುರಕ್ಷಾ ಯೋಜನೆಯು ಪ್ರಗತಿಯಲ್ಲಿರುವುದರಿಂದ ಸದರಿ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಕಾಲಕಾಲಕ್ಕೆ ಬಿಡುಗಡೆಯಾಗುವ ಅನುದಾನವನ್ನು ಬಳಸಿಕೊಂಡು ರಾಜ್ಯದ ಕಂದಾಯ ಕಛೇರಿಗಳಿಗೆ ಉಪಕರಣಗಳನ್ನು ಹಾಗೂ digitisation ಸಂಬಂಧ ಪಡೆದುಕೊಳ್ಳಲಾದ DEOs ಗಳ ವೇತನ ಪಾವತಿ ಸಂಬಂಧ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗುತ್ತಿರುತ್ತದೆ.<br>ಮುಂದುವರೆದು ಕೇಂದ್ರ ಸರ್ಕಾರದಿಂದ ತಾಲ್ಲೂಕು ಕಛೇರಿಗಳ Modern Record Room ಅನುಷ್ಠಾನಕ್ಕೆ ಹಾಗೂ Scanning of Legacy Records in Tehsils ಗಾಗಿ ಈವರೆಗೂ ರೂ.37.42 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. |

| | | |
|---|---|---|
| ಈ | ಭೂ ಸುರಕ್ಷಾ ಯೋಜನೆಗೆ ಸಂಬಂಧಿಸಿದಂತೆ, ವಿಧಾನ ಪರಿಷತ್ ಶಾಸಕರಿಗೆ ಶಿಷ್ಟಾಚಾರ ಉಲ್ಲಂಘನೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸದರಿ ಯೋಜನೆಯಲ್ಲಿ ಯಾವುದೇ ಶಿಷ್ಟಾಚಾರ ಉಲ್ಲಂಘನೆಯಾಗಿರುವುದಿಲ್ಲ. |
| ಉ | ಶಿಷ್ಟಾಚಾರ ಉಲ್ಲಂಘನೆ ಬಗ್ಗೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು? | ಅನ್ವಯಿಸುವುದಿಲ್ಲ. |

ಕಂಇ **91** ಎಂಆರ್‌ಆರ್ **2026**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು